ದಿನಾಂಕ 31.08.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ- ಅರ್ಜಿದಾರರ ಪರ ವಕೀಲರಿಂದಃ-**

ನಾನು ಈ ಅರ್ಜಿಯಲ್ಲಿ ಅರ್ಜಿದಾರಳಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದಲ್ಲಿ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿ, ಹೇಳಿಕೆ, ಸ್ವತ್ತು ಅಮಾನತು ಮಹಜರು, ದೋಷರೋಪಣಾ ಪಟ್ಟಿ, , ಸ್ಥಳ ಮಹಜರ, ಗಾಯದ ಪ್ರಮಾಣಪತ್ರ, ಐಂ.ಎಂ.ವಿ ವರದಿ ಗಳ ದೃಢೀಕೃತ ನಕಲುಗಳನ್ನು ನಿಪಿ.1 ರಿಂದ 7 ಎಂದು, ಡಿಸ್ಚಾರ್ಜ್ ಸಮ್ಮರಿಯನ್ನು ನಿಪಿ.8 ಎಂದು, ಆಧಾರ ಕಾರ್ಡ್ ನನೋಟರಿ ದೃಢೀಕೃತ ನಕಲನ್ನು ನಿಪಿ.9 ಎಂದು, ಟ್ರಿಪ್ ಶೀಟ್ ರಶೀದಿಯನ್ನು ನಿಪಿ. 10 ಎಂದು, 48 ವೈದ್ಯಕೀಯ ಬಿಲ್ಲುಗಳನ್ನು ಒಟ್ಟಾರೆಯಾಗಿ ನಿಪಿ.11 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 3ನೇ ಎದುರುದಾರರ ಪರ ವಕೀಲರಾದ ಶ್ರೀ.ಪಿ.ಟಿ.ಜಿ. ರವರ ಪರ ಶ್ರೀ. ಎ.ಬಿ. ವಕೀಲರಿಂದಃ**

ಅಪಘಾತವಾದ ಸಮಯದಲ್ಲಿ ನಾನು ಬಸ್ಸನ್ನು ಇಳಿದು, ಮನೆಯ ಕಡೆ ಹೋಗುತ್ತಿದ್ದೆನು. ಆ ಸಂದರ್ಭದಲ್ಲಿ ಬೈಕ್ ನನ್ನ ಹಿಂಬದಿಯಿಂದ ಬರುತ್ತಿತ್ತು. ನಾನು ಏಕಾಏಕಿ ರಸ್ತೆಯನ್ನು ದಾಟಲು ಹೋಗಿದ್ದರಿಂದ ಅಪಘಾತವಾಗಿರುತ್ತದೆಯೋ ಹೊರತು ಬೈಕ್ ಚಾಲಕನ ಅಜಾಗರೂಕತೆಯಿಂದ ಮತ್ತು ನಿರ್ಲಕ್ಷತೆಯ ಚಾಲನೆಯಿಂದ ಉಂಟಾಗಿರುತ್ತದೆ ಎಂದರೆ ಸರಿಯಲ್ಲ. ನಾನು ಚಿಕಿತ್ಸೆಯನ್ನು ಮಂಗಳೂರಿನ ಯನಪೋಯ ಆಸ್ಪತ್ರೆಯಲ್ಲಿ ಪಡೆದುಕೊಂಡಿರುತ್ತೇನೆ. ನಾನು 20 ದಿವಸ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ನಾನು ರೂ. 1,20,000/- ಹಣವನ್ನು ಚಿಕಿತ್ಸೆಗಾಗಿ ಖರ್ಚು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಆಸ್ಪತ್ರೆಯವರು ನೀಡಿದ ಅಂತಿಮ ಬಿಲ್ಲನ್ನು ಹಾಜರುಪಡಿಸಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಹಣ ಪಾವತಿ ಮಾಡಿದ ಬಗ್ಗೆ ಅಂತಿಮ

ಬಿಲ್ಲನ್ನು ಪಡೆದ ಬಗ್ಗೆ ನನಗೆ ಗೊತ್ತಿಲ್ಲ. ನಿಶಾನೆ ಪಿ. 11 ಬಿಲ್ಲುಗಳನ್ನು ಈ ಕೇಸಿಗೋಸ್ಕರ ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತವಾದಾಗ ನನಗೆ 70 ವರ್ಷ ವಯಸ್ಸಾಗಿತ್ತು. ಅಪಘಾತದಿಂದ ನನಗೆ ಯಾವುದೇ ಅಂಗನ್ಯೂನತೆಯಾಗಿರುವುದಿಲ್ಲ ಎಂದರೆ ಸರಿಯಲ್ಲ. ನನಗೆ ವಯಸ್ಸಾಗಿರುವುದರಿಂದ ಮೊದಲಿನ ರೀತಿ ಕೆಲಸ ಮಾಡಲು ಆಗುತ್ತಿಲ್ಲ ಎಂದರೆ ಸರಿಯಲ್ಲ. ನಾನು ಈಗಲೂ ಸಹ ಮೊದಲಿನ ರೀತಿಯಲ್ಲಿ ನಡೆದಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹೆಚ್ಚಿ ನ ಪರಿಹಾರವನ್ನು ಪಡೆಯುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.